# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| (1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 96 |
| (2) | ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| (3) | ಉತ್ತರಿಸಬೇಕಾದ ದಿನಾಂಕ | : | 09.07.2018 |
| (4) | ಉತ್ತರಿಸುವ ಸಚಿವರು | : | ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು. |

| | ಪ್ರಶ್ನೆ | ಉತ್ತರ |
|---|---|---|
| (ಅ) | ಮಾನ್ವಿ ಪಟ್ಟಣದ ತಾಲ್ಲೂಕು ನ್ಯಾಯಾಲಯ ಸಂಕೀರ್ಣ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; | ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ನ್ಯಾಯಾಲಯ ಸಂಕೀರ್ಣದಲ್ಲಿ ನೆಲಮಹಡಿ ಮತ್ತು ಮೊದಲನೆ ಮಹಡಿ (2ನೇ ಮಹಡಿ ನಿರ್ಮಾಣ ಮಾಡಲು ಅನುವಾಗುವಂತೆ) ನಿರ್ಮಾಣಕ್ಕೆ ದಿನಾಂಕ: 01.03.2018 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಕಟ್ಟಡದ ನೆಲಮಹಡಿ ಮತ್ತು ಮೊದಲನೇ ಮಹಡಿ ಕಾಮಗಾರಿಗೆ 2017-18ನೇ ಸಾಲಿನ ಆಯವ್ಯಯದ ಅಪೆಂಡಿಕ್ಸ್ – ಇ ಅಂದಾಜಿನಲ್ಲಿ ರೂ. 845.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಈ ಮೊತ್ತದಲ್ಲಿ ರೂ.338.00 ಲಕ್ಷಗಳನ್ನು ಪ್ರಸಕ್ತ ಸಾಲಿಗೆ ಮೀಸಲಿರಿಸಲಾಗಿದೆ.<br><br>ನ್ಯಾಯಾಲಯ ಸಂಕೀರ್ಣ ನಿರ್ಮಾಣಕ್ಕೆ ಅನುಮೋದಿತ ನಕ್ಷೆಯನುಸಾರ ಅಂದಾಜು ಪಟ್ಟಿಯನ್ನು ಸಲ್ಲಿಸುವಂತೆ ಲೋಕೋಪಯೋಗಿ ಪ್ರಾಧಿಕಾರವನ್ನು ಕೋರಲಾಗಿದ್ದು, ಅಂದಾಜು ಪಟ್ಟಿ ಸ್ವೀಕೃತಗೊಂಡ ನಂತರ ಕಟ್ಟಡ ಕಾಮಗಾರಿಗೆ ಕ್ರಮ ಕೈಗೊಳ್ಳಲಾಗುವುದು. |
| (ಆ) | ರಾಯಚೂರು ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಪೂರ್ಣಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು? | ರಾಯಚೂರಿನಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ, ನ್ಯಾಯಾಂಗ ಅಧಿಕಾರಿಗಳ ವಸತಿ ಗೃಹ, ವಕೀಲರ ಸಂಘದ ಕಟ್ಟಡಗಳನ್ನು ನಿರ್ಮಾಣ ಮಾಡಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಯಚೂರು ನಗರದಲ್ಲಿ 10 ಎಕರೆ 32 ಗುಂಟೆ ಜಾಗವನ್ನು ರಾಯಚೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಹೆಸರಿಗೆ ದಿನಾಂಕ: 22.05.2017 ರಂದು ಹಸ್ತಾಂತರಿಸಲಾಗಿದೆ.<br><br>ಸದರಿ ಜಾಗದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ, ನ್ಯಾಯಾಂಗ ಅಧಿಕಾರಿಗಳ ವಸತಿ ಗೃಹ, ವಕೀಲರ ಸಂಘದ ಕಟ್ಟಡ ಇತ್ಯಾದಿ ನಿರ್ಮಾಣ ಮಾಡಲು ಹ್ಯಾಂಡ್ ಸ್ಕೆಚ್ ಅನ್ನು ಲೋಕೋಪಯೋಗಿ ಪ್ರಾಧಿಕಾರದಿಂದ ಪಡೆಯಲು ಕ್ರಮ ಕೈಗೊಳ್ಳಲಾಗಿದೆ.<br><br>ಮುಂದುವರೆದು, ಇಂಡಿಯನ್ ಮೆಡಿಕಲ್ ಅಸೋಸಿಯೇಷನ್, ರಾಯಚೂರು, ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ: 34391/2017 (ಜಿಎಂ-ಆರ್‌ಎಸ್) ರ ಅರ್ಜಿಯಲ್ಲಿ ರಾಯಚೂರು ನಗರದಲ್ಲಿ ನ್ಯಾಯಾಂಗ ಇಲಾಖೆಗೆ ಹಸ್ತಾಂತರಿಸಲಾದ 10 ಎಕರೆ 32 ಗುಂಟೆ ಜಾಗ ಆರೋಗ್ಯ ಇಲಾಖೆಗೆ ಸಂಬಂಧಿಸಿದೆ ಎಂಬುದಾಗಿ ದಾವೆ ಹೂಡಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ: 04.04.2018 ರಂದು ಪ್ರಕರಣವನ್ನು ವಿಚಾರಣೆ ನಡೆಸಿ ಮುಂದೂಡಿರುತ್ತದೆ. |

(ಸಂಖ್ಯೆ: ಲಾ 48 ಎಲ್‌ಸಿಕ್ಯೂ 2018)

(ಕೃಷ್ಣ ಬೈರೇಗೌಡ)
ಕಾನೂನು, ಸಂಸದೀಯ ವ್ಯವಹಾರಗಳು
ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್‌ರಾಜ್ ಸಚಿವರು.